**All India Radio: Bangalore**
**Regional Bulletin In Kannada**
**01.08.2025 / 2.30 p.m.**
**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**01.08.2025 / 2.30 p.m.**
**<><><><>**

ಮುಖ್ಯಾಂಶಗಳು

1. ವ್ಯಸನ ಮುಕ್ತ ದಿನಾಚರಣೆ ಅಂಗವಾಗಿ ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ಜಾಗೃತಿ
2. ರಾಜ್ಯದ ೫ ಜಿಲ್ಲೆಗಳಲ್ಲಿ ಖಾದಿ ಚಟುವಟಿಕೆ ಉತ್ತೇಜಿಸಲು ಖಾದಿ ಮಂಡಳಿ ಸ್ಥಾಪನೆಗೆ ನಿರ್ಧಾರ\
3. ಲೈಂಗಿಕ ದೌರ್ಜನ್ಯ ಪ್ರಕರಣ : ಮಾಜಿ ಸಂಸದ ಪ್ರಜ್ವಲ್ ರೇವಣ್ಣ ಮೇಲಿನ ಆರೋಪ ಸಾಬೀತು, ಶಿಕ್ಷೆ ಪ್ರಮಾಣ ನಾಳೆ ಪ್ರಕಟ
4. ಮೈಸೂರಿನ ಕೆಸರೆ ಘನತ್ಯಾಜ್ಯ ನಿರ್ವಹಣಾ ಘಟಕಕ್ಕೆ ಉಪ ಲೋಕಾಯುಕ್ತ ಕೆ.ಎನ್. ಪಣೀಂದ್ರ ಭೇಟಿ, ಪರಿಶೀಲನೆ

<><><><>

ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೊಡ್ಡಬಳ್ಳಾಪುರದಲ್ಲಿ ರಾಷ್ಟ್ರೀಯ ಹಬ್ಬಗಳ ಆಚರಣಾ ಸಮಿತಿ ವತಿಯಿಂದ ಡಾಕ್ಟರ್ ಮಹಾಂತ ಶಿವಯೋಗಿಗಳ ಜಯಂತಿ ಕಾರ್ಯಕ್ರಮವನ್ನು ವ್ಯಸನಮುಕ್ತ ದಿನವನ್ನು ಆಚರಿಸಲಾಯಿತು. ಈ ವೇಳೆ ಶಾಸಕ ಧೀರಜ್ ಮುನಿರಾಜು ಮಾತನಾಡಿ, ವ್ಯಸನಗಳಿಂದ ಭವಿಷ್ಯ ಕರಾಳವಾಗುತ್ತದೆ. ಮಹಾಂತ ಶಿವಯೋಗಿಗಳು ಸಂತರಾಗಿ, ಪವಾಡ ಪುರುಷರಾಗಿ, ಸಮಾಜವನ್ನು ತಿದ್ದುವ ಕಾಯಕದಲ್ಲಿ ನಿರತರಾಗಿದ್ದರು. ಇಂತಹ ಮಹಾಮಹಿಮರು ಮಾದರಿಯಾಗಬೇಕಿದೆ ಎಂದರು. ತಹಸೀಲ್ದಾರ್ ವಿಭಾ ವಿದ್ಯಾ ರಾಥೋಡ್ ಅವರು ಮಹಾಂತ ಶಿವಯೋಗಿಗಳ ಸಮಾಜ ಸೇವೆಯನ್ನು ಸ್ಮರಿಸಿದರು.

<><><><>

ವ್ಯಸನ ಮುಕ್ತ ಸಮಾಜ ನಿರ್ಮಾಣ ಮಾಡುವಲ್ಲಿ ಪ್ರತಿಯೊಬ್ಬರು ಕೈಜೋಡಿಸಬೇಕು. ಯುವ ಜನತೆ ಯಾವದೇ ವ್ಯಸನಗಳಿಗೆ ಒಳಗಾಗಬಾರದು ಎಂದು ಶಾಸಕ ತನ್ವೀರ್ ಸೇಠ್ ಮನವಿ ಮಾಡಿದರು. ಮೈಸೂರಿನಲ್ಲಿ ಇಂದು ಕರ್ನಾಟಕ ರಾಜ್ಯ ಮದ್ಯಪಾನ ಸಂಯಮ ಮಂಡಳಿ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಹಾಗೂ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಸಹಯೋಗದಲ್ಲಿ ಡಾ. ಮಹಾಂತೇಶ್ ಶಿವಯೋಗಿಗಳ ಜನ್ಮದಿನಾಚರಣೆಯ ಅಂಗವಾಗಿ ಸರ್ಕಾರಿ ಸಿಪಿಸಿ ಪಾಲಿಟೆಕ್ನಿಕ್ ಕಾಲೇಜಿನಲ್ಲಿ ಹಮ್ಮಿಕೊಂಡಿದ್ದ ವ್ಯಸನ ಮುಕ್ತ ದಿನಾಚರಣೆಯ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು. ಮಾನವ ಹಾಗೂ ಸಮಾಜದ ಆರೋಗ್ಯಕ್ಕೆ ಹಾನಿಕಾರಕವಾದ ಯಾವುದೇ ವ್ಯಸನ ರೂಢಿಸಿಕೊಳ್ಳಬಾರದು. ಸಮಾಜವನ್ನು ನಿರ್ಮಾಣ ಮಾಡುವ ಹೊಣೆಗಾರಿಕೆ ಯುವಜನತೆಯ ಮೇಲೆ ಇದೆ. ಸ್ವಸ್ಥ ಸಮಾಜವನ್ನು ನಿರ್ಮಾಣ ಮಾಡುವಲ್ಲಿ ಯುವಕರ ಕೊಡುಗೆ ಅಪಾರ ಎಂದು ಅವರು ಹೇಳಿದರು.

<><><><>

ಡಾಕ್ಟರ್ ಮಹಾಂತ ಶಿವಯೋಗಿಗಳ ಜನ್ಮದಿನಾಚರಣೆ ಪ್ರಯುಕ್ತ ವ್ಯಸನ ಮುಕ್ತ ದಿನಾಚರಣೆ ಹಿನ್ನೆಲೆಯಲ್ಲಿ ವಿಜಯಪುರದ ಸಿದ್ಧೇಶ್ವರ ದೇವಸ್ಥಾನದ ಆವರಣದಿಂದ ಆರಂಭಗೊಂಡ ಜನಜಾಗೃತಿ ಜಾಥಾಗೆ ಅಪರ ಜಿಲ್ಲಾಧಿಕಾರಿ ಸೋಮಲಿಂಗ ಗೆಣ್ಣೂರ  ಹಸಿರು ನಿಶಾನೆ ತೋರುವ ಮೂಲಕ ಚಾಲನೆ ನೀಡಿದರು.  ವಿಜಯಪುರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತಿ, ಕರ್ನಾಟಕ ರಾಜ್ಯ ಮದ್ಯಪಾನ ಸಂಯಮ ಮಂಡಳಿ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಶಾಲಾ ಶಿಕ್ಷಣ ಹಾಗೂ ಸಾಕ್ಷರತಾ ಇಲಾಖೆ, ಸಮಾಜ ಕಲ್ಯಾಣ ಇಲಾಖೆ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಇವರ ಸಹಯೋಗದಲ್ಲಿ ಈ ಜಾಥಾ ನಡೆಯಿತು.

<><><>

ರಾಜ್ಯದಲ್ಲಿ ಖಾದಿ ಚಟುವಟಿಕೆ ಇಲ್ಲದಿರುವ ಉಡುಪಿ, ದಕ್ಷಿಣ ಕನ್ನಡ, ಉತ್ತರ ಕನ್ನಡ, ಚಿಕ್ಕಮಗಳೂರು ಮತ್ತು ಕೊಡಗು ಜಿಲ್ಲೆಗಳಲ್ಲಿ ಖಾದಿ ಚಟುವಟಿಕೆ ಉತ್ತೇಜಿಸಲು ಖಾದಿ ಮಂಡಳಿ ಸ್ಥಾಪನೆಗೆ ಉದ್ದೇಶಿಸಲಾಗಿದೆ ಎಂದು ಕರ್ನಾಟಕ ಖಾದಿ ಮತ್ತು ಗ್ರಾಮೋದ್ಯೋಗ ಮಂಡಳಿ ಅಧ್ಯಕ್ಷ ಬಸನಗೌಡ ತುರವಿಹಾಳ ತಿಳಿಸಿದ್ದಾರೆ. ದಾವಣಗೆರೆಯಲ್ಲಿಂದು ಆರಂಭಗೊಂಡ ರಾಜ್ಯ ಮಟ್ಟದ ಖಾದಿ ವಸ್ತು ಪ್ರದರ್ಶನ ಮತ್ತು ಮಾರಾಟ ಮೇಳ ಉದ್ಘಾಟಿಸಿ ಅವರು ಮಾತನಾಡಿದರು. ಖಾದಿ ಚಟುವಟಿಕೆ ಇಲ್ಲದ ಈ ಐದು ಜಿಲ್ಲೆಗಳಲ್ಲಿ ಆಸಕ್ತ ಸಂಸ್ಥೆಗಳು ನೋಂದಣಿಯಾದಲ್ಲಿ ಖಾದಿ ಉತ್ಪಾದನೆ ಅಗತ್ಯವಿರುವ ಚರಕ ಮತ್ತು ಮಗ್ಗಗಳ ಖರೀದಿಗೆ ಸಹಕಾರ ಕಲ್ಪಿಸಲು ಉದ್ದೇಶಿಸಲಾಗಿದೆ ಎಂದು ಹೇಳಿದರು. ಖಾದಿ ಉತ್ಪನ್ನದ ಗುಣಮಟ್ಟ ಸುಧಾರಿಸುವ ತಂತ್ರಜ್ಞಾನ ಅಭಿವೃದ್ಧಿಪಡಿಸಲು ರಾಜ್ಯದಲ್ಲಿ ಟೆಕ್ಸ್‌ಟೈಲ್ ವಿಷಯದಲ್ಲಿ ಎಂಜಿನಿಯರಿಂಗ್ ಪದವಿ ನೀಡುತ್ತಿರುವ ೩ ಕಾಲೇಜುಗಳಿಗೆ ಸಂಶೋಧನ ನೆರವು ನೀಡಲು ಉದ್ದೇಶಿಸಲಾಗಿದೆ ಎಂದು ಅವರು ತಿಳಿಸಿದರು.

<><><>

ಮನೆಗೆಲಸದ ಮಹಿಳೆ ಮೇಲೆ ಲೈಂಗಿಕ ದೌರ್ಜನ್ಯ ಎಸಗಿದ ಪ್ರಕರಣಕ್ಕೆ ಸಂಬಂಧಿಸಿದಂತೆ ಮಾಜಿ ಸಂಸದ ಪ್ರಜ್ವಲ್ ರೇವಣ್ಣ ಮೇಲಿನ ಆರೋಪ ಸಾಬೀತಾಗಿದೆ ಎಂದು ಜನಪ್ರತಿನಿಧಿಗಳ ನ್ಯಾಯಾಲಯ ಇಂದು ತೀರ್ಪು ಪ್ರಕಟಿಸಿದೆ. ಶಿಕ್ಷೆ ಪ್ರಮಾಣ ನಾಳೆ ಪ್ರಕಟವಾಗಲಿದೆ. ನ್ಯಾಯಾಧೀಶರಾದ ಸಂತೋಷ್ ಗಜಾನನ ಭಟ್ ಈ ತೀರ್ಪು ಪ್ರಕಟಿಸಿದರು. ಕಳೆದ ವರ್ಷ ಪ್ರಜ್ವಲ್ ರೇವಣ್ಣ ಅವರನ್ನು ಬಂಧಿಸಲಾಗಿದ್ದು, ೧೪ ತಿಂಗಳಿಂದ ಅವರು, ಕಾರಾಗೃಹವಾಸ ಅನುಭವಿಸುತ್ತಿದ್ದಾರೆ.

<><><>

ಕೋಲಾರ ಜಿಲ್ಲೆಯ ಕೆ.ಜಿ.ಎಫ್ ತಾಲೂಕಿನ ಜಕಾರಸ ಕುಪ್ಪ ಗ್ರಾಮದಲ್ಲಿ   ಕರೂರು ವೈಶ್ಯಾ ಬ್ಯಾಂಕ್ ಶಾಖೆಯ ಆಶ್ರಯದಲ್ಲಿ ಆರ್ಥಿಕ ಸಾಕ್ಷರತಾ  ಆಂದೋಲನ ನಡೆಯಿತು. ಕೇಂದ್ರ ಸರ್ಕಾರದ  ಸಾಮಾಜಿಕ ಸುರಕ್ಷತಾ ಯೋಜನೆಗಳ ಬಗ್ಗೆ ಸಾರ್ವಜನಿಕರಿಗೆ ಮಾಹಿತಿ ನೀಡಲಾಯಿತು. ಕೋಲಾರ ಜಿಲ್ಲಾ ಲೀಡ್ ಬ್ಯಾಂಕ್ ಮ್ಯಾನೇಜರ್ ಮಹದೇವ್ ಎಸ್.ಜೋಶಿ ಮಾತನಾಡಿ, ಈಗಾಗಲೇ ಕೋಲಾರ ಜಿಲ್ಲೆಯ ೫೮ ಗ್ರಾಮ ಪಂಚಾಯಿತಿ ಕೇಂದ್ರಗಳಲ್ಲಿ ಆರ್ಥಿಕ ಸಾಕ್ಷರತಾ ಆಂದೋಲನಗಳನ್ನು  ನಡೆಸಲಾಗಿದೆ. ಉಳಿದ ೯೪ ಗ್ರಾಮ

ಪಂಚಾಯಿತಿ ಗಳಲ್ಲಿ ಆಂದೋಲನ ನಡೆಸಲಾಗುವುದು. ಸಾಮಾಜಿಕ ಸುರಕ್ಷತಾ ಯೋಜನೆಗಳು ಜಾರಿಗೆ ಬಂದು ಹತ್ತು ವರ್ಷಗಳು ಕಳೆದಿವೆ. ಆದರೆ ಜನರಿಗೆ ಸರಿಯಾದ ಮಾಹಿತಿ ಇಲ್ಲ. ಮಾಹಿತಿ ತಲುಪಿಸುವ ಉದ್ದೇಶದಿಂದ ಆರ್ಥಿಕ ಸಾಕ್ಷರತಾ ಆಂದೋಲನ ಹಮ್ಮಿಕೊಳ್ಳಲಾಗಿದೆ ಎಂದು ಹೇಳಿದರು. ಕರೂರು ವೈಶ್ಯಾ ಬ್ಯಾಂಕ್ ಸಹಾಯಕ ಜನರಲ್ ಮ್ಯಾನೇಜರ್ ವೈದ್ಯ ನಾಥ್ ಪಾಟೀಲ್ ಮಾತನಾಡಿ, ಕೇಂದ್ರ ಸರ್ಕಾರ ಜಾರಿಗೆ ತಂದಿರುವ ಸಾಮಾಜಿಕ ಸುರಕ್ಷಾ ಯೋಜನೆಗಳು ಸಮರ್ಪಕವಾಗಿ ಸದುಪಯೋಗವಾಗಬೇಕು. ಆನ್‌ಲೈನ್ ವಂಚನೆಗಳು ಹಾಗೂ ಡಿಜಿಟಲ್ ಅರೆಸ್ಟ್ ಬಗ್ಗೆ ಎಚ್ಚರ ವಹಿಸಬೇಕು. ಯಾವುದೇ ರೀತಿಯ ಒಟಿಪಿಗಳನ್ನು ಹಂಚಿಕೊಳ್ಳಬಾರದು ಎಂದರು.

<><><><>

ಉಪ ಲೋಕಾಯುಕ್ತರಾದ ಕೆ.ಎನ್.ಫಣೀಂದ್ರ ಇಂದು ಮೈಸೂರು ಜಿಲ್ಲೆಯ ಕೆಸರೆ ನೀರು ಸಂಸ್ಕರಣ ಘಟಕ ಹಾಗೂ ಘನ ತ್ಯಾಜ್ಯ ನಿರ್ವಹಣಾ ಘಟಕಕ್ಕೆ ಭೇಟಿ ನೀಡಿ, ಪರಿಶೀಲಿಸಿದರು. ಈ ವೇಳೆ ಮಾತನಾಡಿದ ಅವರು, ಸ್ವಚ್ಛತೆಯ ಬಗ್ಗೆ ಹಾಗೂ ಒಣ ಕಸ ಮತ್ತು ಹಸಿ ಕಸದ ಬಗ್ಗೆ ಜನರಲ್ಲಿ ಜಾಗೃತಿ ಮೂಡಿಸಬೇಕು ಎಂದು ಅಧಿಕಾರಿಗಳಿಗೆ ಸೂಚಿಸಿದರು. ವೈಜ್ಞಾನಿಕ ರೀತಿಯಲ್ಲಿ ತಜ್ಞರಿಂದ ತಪಾಸಣೆ ಮಾಡಿಸಿ, ಘನ ತ್ಯಾಜ್ಯ ನಿರ್ವಹಣಾ ಘಟಕದ ೫ ಕಿಲೋ ಮೀಟರ್ ವ್ಯಾಪ್ತಿ ಒಳಗಿರುವ ಮನೆ ಮತ್ತು ಹೋಟೆಲ್‌ನಲ್ಲಿರುವ ಜನರಿಗೆ ತೊಂದರೆ ಆಗಿದ್ದರೆ, ಈ ಕುರಿತು ಪರಿಶೀಲನೆ ನಡೆಸಿ, ವರದಿ ಸಲ್ಲಿಸುವಂತೆ ಜಿಲ್ಲಾಧಿಕಾರಿಗಳಿಗೆ ನಿರ್ದೇಶಿಸಿದರು.

<><><><>

ಹಾವೇರಿ ಜಿಲ್ಲೆ ರಟ್ಟೀಹಳ್ಳಿ ಪಟ್ಟಣ ಪಂಚಾಯಿತಿ ಚುನಾವಣೆ ಇದೇ ೧೭ರಂದು ಜರುಗಲಿದ್ದು, ಈಗಾಗಲೇ ಅಂತಿಮ ಮತದಾರರ ಪಟ್ಟಿ ಸಿದ್ಧವಾಗಿದೆ. ಈ ಪಟ್ಟಿಯನ್ನು ತಹಸೀಲ್ದಾರ್ ಕಾರ್ಯಾಲಯ ಹಾಗೂ ಪಟ್ಟಣ ಪಂಚಾಯಿತಿ ಕಾರ್ಯಾಲಯದ ಸೂಚನಾ ಫಲಕದಲ್ಲಿ ಸಾರ್ವಜನಿಕವಾಗಿ ಪ್ರಕಟಿಸಲಾಗಿದೆ ಎಂದು ತಹಸೀಲ್ದಾರ್ ಶ್ವೇತಾ ಅಮರಾವತಿ ತಿಳಿಸಿದ್ದಾರೆ. ಪಟ್ಟಣ ಪಂಚಾಯಿತಿ ಚುನಾವಣೆ ಹಿನ್ನೆಲೆಯಲ್ಲಿ ೧೫ ಮತಗಟ್ಟೆಗಳನ್ನು ಸ್ಥಾಪಿಸಲಾಗಿದ್ದು, ಒಟ್ಟು ೫ ಸಾವಿರ ೮೬೯ ಪುರುಷರು, ಮತ್ತು ೫ ಸಾವಿರ ೮೪೨ ಮಹಿಳೆಯರು ಹಾಗೂ ಇತರೆ ಒಬ್ಬರು ಸೇರಿ ಒಟ್ಟು ೧೧ ಸಾವಿರ ೭೧೨ ಮತದಾರರಿದ್ದಾರೆ ಎಂದು ಮಾಹಿತಿ ನೀಡಿದರು. ಪ್ರತಿಯೊಂದು ವಾರ್ಡ್‌ಗಳಿಗೆ ಪ್ರತ್ಯೇಕವಾಗಿ ಮತಗಟ್ಟೆ ಸ್ಥಾಪನೆ ಮಾಡಲಾಗಿದೆ. ಪಟ್ಟಣದಲ್ಲಿ ಪಾರದರ್ಶಕ ಮತದಾನಕ್ಕೆ ಸಾರ್ವಜನಿಕರು ಶಾಂತಿಯಿಂದ ಸಹಕರಿಸಬೇಕು ಎಂದು ತಹಸೀಲ್ದಾರ್ ಮನವಿ ಮಾಡಿದರು.

<><><><>

ಇಂದಿನಿಂದ ಮೈಸೂರು ಮೃಗಾಲಯದ ಪ್ರವೇಶ ದರ ಶೇಡಕ ೨೦ರಷ್ಟು ಹೆಚ್ಚಳ ಮಾಡಲಾಗಿದೆ ಎಂದು ಮೃಗಾಲಯ ಕಾರ್ಯನಿರ್ವಾಹಕ ಅಧಿಕಾರಿ ರಂಗಸ್ವಾಮಿ ತಿಳಿಸಿದ್ದಾರೆ. ಇತ್ತೀಚೆಗೆ ಜರ್ಮನ್, ಆಫ್ರಿಕಾದಿಂದ ತಂದಿರುವ ಹಂಟರ್ ಗೊರಿಲ್ಲಾ, ಚೀತಾ, ಜಾಗ್ವಾರ್ ಸೇರಿದಂತೆ ಅನೇಕ ಪ್ರಾಣಿಗಳನ್ನು ಸಾಕುವ ವೆಚ್ಚ ದುಬಾರಿಯಾದ ಹಿನ್ನೆಲೆಯಲ್ಲಿ ಅನಿವಾರ್ಯವಾಗಿ ಪ್ರವೇಶ ದರ ಹೆಚ್ಚಳ ಮಾಡಲಾಗಿದೆ ಎಂದು ಹೇಳಿದರು. ನಾಲ್ಕು ವರ್ಷಗಳ ನಂತರ ದರ ಪರಿಷ್ಕರಣೆ ಮಾಡಲಾಗಿದ್ದು, ವಯಸ್ಕರಿಗೆ ೧೦೦ ರೂಪಾಯಿ ಇದ್ದ ಟಿಕೆಟ್ ದರ ೧೨೦

ರೂಪಾಯಿಗೆ ಏರಿಕೆಯಾಗಿದೆ. ಮಕ್ಕಳಿಗೆ ೫೦ ರೂಪಾಯಿ ಇದ್ದ ದರ, ೭೦ ರೂಪಾಯಿ ಏರಿಕೆಯಾಗಿದೆ. ಮೃಗಾಲಯ, ಕಾರಂಜಿ ಕಾಂಬೋಗೆ ವಯಸ್ಕರಿಗೆ ೧೫೦ ರೂಪಾಯಿ ನಿಗದಿಯಾಗಿದ್ದು, ಮಕ್ಕಳಿಗೆ ೮೦ ರೂಪಾಯಿ ನಿಗದಿ ಮಾಡಲಾಗಿದೆ ಎಂದು ವಿವರಿಸಿದರು.

<><><><>

ಕೊಂಕಣ ರೈಲ್ವೆ ಮಾರ್ಗದ ರೈಲುಗಳಿಗೆ ಕೆಪಿಸಿಯಿಂದ ನೇರವಾಗಿ ವಿದ್ಯುತ್ ಒದಗಿಸಲು ನಿರ್ಮಿಸಲಾದ ವಿದ್ಯುತ್ ಗ್ರಿಡ್ ಅನ್ನು ಕೊಂಕಣ ರೈಲ್ವೆ ನಿಗಮದ ಅಧ್ಯಕ್ಷ ಹಾಗೂ ವ್ಯವಸ್ಥಾಪಕ ನಿರ್ದೇಶಕ ಸಂತೋಷ್ ಕುಮಾರ್ ಜಾ ಉದ್ಘಾಟಿಸಿದರು. ರಾಜ್ಯಗಳ ವಿದ್ಯುತ್ ಪೂರೈಕೆ ಕಂಪನಿಗಳಿಂದ ಕೊಂಕಣ ರೈಲ್ವೆ ನಿಗಮವು ವಿದ್ಯುತ್ ಪಡೆಯುತ್ತಿದ್ದು, ರಾಜ್ಯದ ಮುಲಿ, ಬಾರ್ಕೂರು, ಸೇನಾಪುರ, ಕುಂದಾಪುರ ಮುರ್ಡೇಶ್ವರ, ಕುಮಟಾ, ಕಾರವಾರ ಹೀಗೆ ವಿದ್ಯುತ್ ಗ್ರಿಡ್‌ಗಳಿಂದ ವಿದ್ಯುತ್ ಸಂಪರ್ಕ ಹೊಂದಲಾಗಿದೆ. ಆದರೆ ಈ ಗ್ರಿಡ್‌ಗಳಲ್ಲಿ ವಿದ್ಯುತ್ ಕೈಕೊಟ್ಟರೆ, ರೈಲುಗಳ ಸಂಚಾರಕ್ಕೆ ಗೋವಾದ ಬಾಳ್ಳಿ ಗ್ರಿಡ್‌ನಿಂದ ಕರ್ನಾಟಕ ವಿದ್ಯುತ್ ಪಡೆಯಬೇಕಿತ್ತು. ಈ ಸಮಸ್ಯೆ ತಪ್ಪಿಸಲು ವಿದ್ಯುತ್ ಉತ್ಪಾದಿಸುವ ಕೆಪಿಸಿಯಿಂದಲೇ ನೇರವಾಗಿ ಪಡೆಯಲು ವಿದ್ಯುತ್ ನಿಗಮವು ಓಪನ್ ಆಕ್ಸಿಸ್ ಬಿಲ್ಲಿಂಗ್ ವ್ಯವಸ್ಥೆಯನ್ನು ಮಾಡಿಕೊಂಡಿದೆ. ಕದ್ರಾ ವಿದ್ಯುದಾಗಾರದಿಂದ ನೇರವಾಗಿ ೧೧೦ ಕೆವಿ ವಿದ್ಯುತ್ ಲೈನ್ ಎಳೆದು ವಿದ್ಯುತ್ ಸಂಪರ್ಕ ಪಡೆಯಲಾಗಿದೆ. ಇದರಿಂದ ಮುರ್ಡೇಶ್ವರ ಅಥವಾ ಕುಮಟಾ ಮುಂತಾದೆಡೆ ವಿದ್ಯುತ್ ಸಂಪರ್ಕ ಕೈಕೊಟ್ಟರೆ, ಗೋವಾ ಮೊರೆ ಹೋಗುವ ಅವಶ್ಯಕತೆ ಇಲ್ಲ ಎಂದು ಕೊಂಕಣ ರೈಲ್ವೆ ನಿಗಮ ತಿಳಿಸಿದೆ.

<><><><>

ಪರಿಶಿಷ್ಟ ಜಾತಿಗಳ ಒಳ ಮೀಸಲಾತಿ ಜಾರಿ ಮಾಡುವಂತೆ ಒತ್ತಾಯಿಸಿ ದಲಿತ ಸಂಘಟನೆಗಳ ನೂರಾರು ಕಾರ್ಯಕರ್ತರು ಇಂದು ಚಿಕ್ಕಬಳ್ಳಾಪುರ ಜಿಲ್ಲಾಧಿಕಾರಿಗಳ ಕಚೇರಿ ಎದುರು ಅರೆಬೆತ್ತಲೆಯಾಗಿ ರಸ್ತೆ ತಡೆ ಮಾಡಿ, ಪ್ರತಿಭಟಿಸಿದರು. ರಾಜ್ಯ ಸರ್ಕಾರ ಕೂಡಲೇ ಒಳ ಮೀಸಲಾತಿ ಜಾರಿ ಮಾಡುವ ಮೂಲಕ ಸಾಮಾಜಿಕ ನ್ಯಾಯ ಒದಗಿಸಬೇಕು ಎಂದು ಪ್ರತಿಭಟನಾಕಾರರು ಆಗ್ರಹಿಸಿದರು.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>